SRI DEVARAJ URS ACADEMY OF HIGHER EDUCATION & RESEARCH
SRI DEVARAJ URS MEDICAL COLLEGE
Tamaka, Kolar

UNIVERSITY LIBRARY & LEARNING RESOURCE CENTRE

ಕನ್ನಡಪ್ರಭ

Online Newspaper Clipping Service
Dtd-Saturday, 27th, January- 2018 Page No. 09

# ನೀಟ್: ಇನ್ನು ಎಲ್ಲಾ ರಾಜ್ಯಗಳಿಗೂ ಒಂದೇ ಮಾದರಿ ಪ್ರಶ್ನೆಪತ್ರಿಕೆ

ನವದೆಹಲಿ: ಎಂಬಿಬಿಎಸ್ ಮತ್ತು ಬಿಡಿಎಸ್ ಕೋರ್ಸುಗಳ ಪ್ರವೇಶಕ್ಕೆ ನಡೆಸಲಾಗುವ ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆ- ನೀಟ್‌ನಲ್ಲಿ ಪಾಲ್ಗೊಳ್ಳುವ ವಿದ್ಯಾರ್ಥಿಗಳಿಗೆ ಈ ವರ್ಷದಿಂದ ಒಂದೇ ಮಾದರಿ ಪ್ರಶ್ನೆ ಪತ್ರಿಕೆ ಸಿದ್ಧಪಡಿಸಲಾಗುವುದು ಎಂದು ಸಿಬಿಎಸ್‌ಇ ಸುಪ್ರೀಂಕೋರ್ಟ್‌ಗೆ ಶುಕ್ರವಾರ ತಿಳಿಸಿದೆ. ಹಾಲಿ, ಹಿಂದಿ ಇಂಗ್ಲಿಷ್ ಸೇರಿ ನೀಟ್ ಪರೀಕ್ಷೆಯನ್ನು 10 ಭಾಷೆಗಳಲ್ಲಿ ನಡೆಸಲಾಗುತ್ತಿದೆ. ಈ ವೇಳೆ ಬೇರೆ ಬೇರೆ ಭಾಷೆಗಳಿಗೆ ಬೇರೆ ಬೇರೆ ಪ್ರಶ್ನೆ ಪತ್ರಿಕೆ ಸಿದ್ಧಪಡಿಸಲಾಗುತ್ತಿತ್ತು. ಆದರೆ ಇದು ತರ್ಕಬದ್ಧವಲ್ಲದ ಕ್ರಮ. ಮೌಲ್ಯಮಾಪನ ಮಾಡು ವುದು ಅತ್ಯಂತ ಕಷ್ಟಕರ ಎಂದು ಸುಪ್ರೀಂಕೋರ್ಟ್ ಈ ಹಿಂದೆ ಹೇಳಿತ್ತು.